ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು

## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ     ದಿನಾಂಕ : DATE : 17/2/21

# ಬಳಕೆಯಾಗದ ವಿಶೇಷ ಅನುದಾನ

**ಬೆಂಗಳೂರು:** ನಂಜುಂಡಪ್ಪ ವರದಿ ಶಿಫಾರಸಿನಂತೆ ವಿಶೇಷ ಅಭಿವೃದ್ಧಿ ಯೋಜನೆಗೆ ಕಳೆದ 12 ವರ್ಷಗಳಲ್ಲಿ 37,124.35 ಕೋಟಿ ರೂ. ಅನುದಾನ ಹಂಚಿಕೆಯಾದರೂ ಸಮರ್ಪಕವಾಗಿ ಅನುಷ್ಠಾನ ಆಗದಿರುವ ಅಂಶ ಬೆಳಕಿಗೆ ಬಂದಿದೆ.

ಯೋಜನೆ, ಸಾಂಖ್ಯಿಕ ಖಾತೆ ಸಚಿವ ಕೆ.ಸಿ. ನಾರಾಯಣಗೌಡ ಈ ಸಂಬಂಧ ಮಂಗಳವಾರ ಪ್ರಗತಿ ಪರಿಶೀಲನೆ ಸಭೆ ನಡೆಸಿದ ವೇಳೆ ಈ ಸಂಗತಿ ಗಮನಕ್ಕೆ ಬಂತು. ನಂಜುಂಡಪ್ಪ ವರದಿಯಂತೆ ರಾಜ್ಯದ 114 ತಾಲೂಕುಗಳು ಹಿಂದುಳಿದಿವೆ. ವಿಶೇಷ ಅಭಿವೃದ್ಧಿ ಯೋಜನೆ ಜಾರಿ ಬಗ್ಗೆ 2018ರಲ್ಲಿ ಮೌಲ್ಯಮಾಪನ ಪ್ರಾಧಿಕಾರ ವರದಿ ನೀಡಿದೆ. ಅದರಂತೆ 96 ತಾಲೂಕುಗಳು ಹಿಂದುಳಿದ ಪಟ್ಟಿಯಲ್ಲೇ ಇವೆ. ಇನ್ನು 12 ವರ್ಷಗಳಲ್ಲಿ ಹಂಚಿಕೆಯಾದ 37,124.35 ಕೋಟಿ ರೂ.ಗಳಲ್ಲಿ 27,346.32 ಕೋಟಿ ರೂ. ಮಾತ್ರ ಬಳಕೆಯಾಗಿದೆ. ಈ ನಡುವೆಯೂ ಹಿಂದುಳಿದ ತಾಲೂಕುಗಳಲ್ಲಿ ಸುಧಾರಣೆಯಾಗಿಲ್ಲ.

ಈ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವ ನಾರಾಯಣಗೌಡ, "ವಿಶೇಷ ಅಭಿವೃದ್ಧಿ ಯೋಜನೆಗೆ ನೀಡಲಾದ ಅನುದಾನ ಬಳಕೆಗೆ ಸ್ಪಷ್ಟ ನಿಯಮ ರೂಪಿಸಬೇಕು. ಮುಂದಿನ 3 ವರ್ಷಗಳಲ್ಲಿ ಕೃಷಿ, ಆರೋಗ್ಯ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉದ್ಯಮ ವಲಯ ಸೇರಿದಂತೆ ಹಿಂದುಳಿದ ತಾಲೂಕುಗಳಲ್ಲಿ ಏನೇನು ಕೆಲಸವಾಗಬೇಕು ಎಂಬ ಪಟ್ಟಿ ಮಾಡಬೇಕು. ಅನುದಾನದ ಬಗ್ಗೆಯೂ ಕ್ರಿಯಾಯೋಜನೆ ಸಿದ್ಧಪಡಿಸಬೇಕು," ಎಂದು ಹೇಳಿದರು.